ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಸೋಮವಾರ, ದಿನಾಂಕ : 22ನೇ ಜುಲೈ, 2019

ಗಂಗಾ ಕಲ್ಯಾಣ ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯ ಬಗ್ಗೆ

ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-

435 (643) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2018-19 ಮತ್ತು 2019-20ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಕೊಳವೆ ಬಾವಿಗಳು ಎಷ್ಟು ; ಈ ಯೋಜನೆವಾರು ಫಲಾನುಭವಿಗಳ ಸಂಖ್ಯೆ ಎಷ್ಟು ; ಸದರಿ ಕೊಳವೆ ಬಾವಿ ನಿರ್ಮಾಣಕ್ಕೆ ಖರ್ಚಾಗಿರುವ ಮೊತ್ತ ಎಷ್ಟು ; ಈ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಎಸ್.ಸಿ.ಪಿ. ಹಾಗೂ ಟಿ.ಎಸ್.ಪಿ. ವಿವಿಧ ಯೋಜನೆಗಳಲ್ಲಿ ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಯೋಜನೆಗೆ ಖರ್ಚಾಗಿರುವ ವೆಚ್ಚ ಎಷ್ಟು ?